KA / BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೫	ಬೆಂಗಳೂರು, ಗುರುವಾರ, ಅಕ್ಟೋಬರ್ ೨೧, ೨೦೧೦ (ಆಶ್ವಯುಜ ೨೯ ಶಕ ವರ್ಷ ೧೯೩೨)	ಸಂಚಿಕೆ ೪೧

ಭಾಗ–೬

ಬೆಂಗಳೂರು ವಿಭಾಗಕ್ಕೆ ಮತ್ತು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ತುಮಕೂರು, ಚಿತ್ರದುರ್ಗ, ದಾವಣಗೆರೆ ಮತ್ತು ಶಿವಮೊಗ್ಗ ಜಿಲ್ಲೆಗಳಿಗೆ ಸ್ಥಳೀಯವಾಗಿ ಅನ್ವಯವಾಗುವ ಅಧಿಸೂಚನೆಗಳು ಮತ್ತು ಆದೇಶಗಳು.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಪ್ರಿಲಿಮಿನರಿ ಅಧಿಸೂಚನೆ

ಸಂ.ಕೆ.ಎಸ್.ಎ.:ಸಿಆರ್:114/10–11, ದಿನಾಂಕ:16ನೇ ಸೆಪ್ಟೆಂಬರ್, 2010

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೃಷ್ಣರಾಜಪುರ ಉಪವಲಯದ ವ್ಯಾಪ್ತಿಯಲ್ಲಿ ಬರುವ ಶೀಗೇಹಳ್ಳಿ ಗ್ರಾಮದ ಶೀಗೇಹಳ್ಳಿ ಕಾಲೋನಿ ಕೊಳಚೆ ಪ್ರದೇಶದ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶದಲ್ಲಿ 61 ಕುಟುಂಬಗಳು ವಾಸವಾಗಿದ್ದು, ಈ ಪ್ರದೇಶದಲ್ಲಿ ಹಿಂದಿನ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸ್ವಲ್ಪ ಮಟ್ಟಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದ್ದರೂ ಸಹಾ ಈಗಲೂ ಇದು ಕೊಳಚೆ ಪ್ರದೇಶದ ಗುಣ ಲಕ್ಷಣಗಳನ್ನು ಹೊಂದಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ದಿನಾಂಕ:16.01.2007 ರಿಂದ ಅಸ್ತಿತ್ವಕ್ಕೆ ಬಂದಿರುವ ಹಿನ್ನಲೆಯಲ್ಲಿ ಸದರಿ ಕೊಳಚೆ ಪ್ರದೇಶದಲ್ಲಿನ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ನೀಡಲು ಸರ್ಕಾರ ತೀರ್ಮಾನಿಸಿರುವುದರಿಂದ, ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರ ಸೆಕ್ಷನ್ 3 ರಡಿಯಲ್ಲಿ ಕೊಳಚೆ ಪ್ರದೇಶವೆಂದು ಘೋಷಿಸಲು ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಇವರಿಂದ ವರದಿ ಸಲ್ಲಿಸಲ್ಪಟ್ಟಿರುತ್ತದೆ. ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3 ರಡಿ ಕೊಳಚೆ ಪ್ರದೇಶವೆಂದು ಘೋಷಿಸುವುದು ಅವಶ್ಯವೆಂದು ಕಂಡುಬಂದಿರುತ್ತದೆ.

ಏತನ್ಮಧ್ಯೆ ಸರ್ಕಾರದ ಸುತ್ತೋಲೆ ಸಂ.71 ಕೊಮಂಇ 2009, ದಿನಾಂಕ:24.02.2010ರಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಕಲಂ 3 ಮತ್ತು 11ರಡಿಯಲ್ಲಿ ಜಿಲ್ಲಾಧಿಕಾರಿಗಳು, ಕೊಳಚೆ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸಿ ಅಧಿಸೂಚನೆ ಹೊರಡಿಸುವ ಮುನ್ನ ವಸತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಯವರ ಅನುಮೋದನೆ ಪಡೆಯತಕ್ಕದ್ದೆಂದು ಸೂಚನೆಯಿದ್ದು, ಆ ಪ್ರಕಾರವಾಗಿ ಕೊಳಚೆ ಪ್ರದೇಶಗಳೆಂದು ಘೋಷಣೆ ಮಾಡಬೇಕಾದ ಪ್ರಸ್ತಾವನೆಗಳನ್ನು ಈ ಕಛೇರಿಯಿಂದ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು. ತದನಂತರದಲ್ಲಿ ಸರ್ಕಾರದ ಪತ್ರ ಸಂ.ವಇ 71 ಕೊಮಂಇ 2009, ದಿನಾಂಕ:12.07.2010ರ ಪತ್ರದಲ್ಲಿ ಕೊಳಚೆ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಕೋರಿ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವ ಬದಲು ದಿನಾಂಕ:02.07.2010ರಲ್ಲಿನ ಸೂಚನೆಯಂತೆ ಮತ್ತು ಹಾಲಿ ಅಸ್ತಿತ್ವದಲ್ಲಿರುವ ನಿಯಮಗಳಡಿಯ ಕಾರ್ಯವಿಧಾನವನ್ನನುಸರಿಸಿದಂತೆ ಕ್ರಮವಹಿಸಿ, ಅಧಿಸೂಚನೆ ಸಂಖ್ಯೆ: ವಇ 73 ಕೊಮಂಇ 2001, ದಿನಾಂಕ:26.06.2002ರಲ್ಲಿ ಜಿಲ್ಲಾಧಿಕಾರಿಗಳಿಗೆ ಪ್ರದತ್ತ ಮಾಡಲಾಗಿರುವ ಅಧಿಕಾರ ವ್ಯಾಪ್ತಿಯಲ್ಲಿ ಘೋಷಣೆಗೆ ಕ್ರಮವಹಿಸುವುದು ಎಂದು ಸರ್ಕಾರವು ನಿರ್ದೇಶನ ನೀಡಿ ಪ್ರಸ್ತಾವನೆಗಳನ್ನು ಹಿಂದಿರುಗಿಸಲ್ಪಟ್ಟಿರುತ್ತದೆ ಮತ್ತು ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಅವರಿಗೆ ಹಿಂದಿನಂತೆ ತಮ್ಮ ಕಛೇರಿಯ ಹಂತದಲ್ಲಿಯೇ ಕೊಳಚೆ ಪ್ರದೇಶಗಳ ಘೋಷಣೆಯನ್ನು ಮಾಡಲು ನಿರ್ದೇಶನ ನೀಡಿರುತ್ತದೆ.

ಆದ್ದರಿಂದ ಈ ಕೆಳ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3ರಡಿ ಜಿಲ್ಲಾಧಿಕಾರಿಗಳಿಗೆ ದತ್ತವಾಗಿರುವ ಅಧಿಕಾರದಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ರವರು 'ಕೊಳಚೆ ಪ್ರದೇಶ' ವೆಂದು ಘೋಷಿಸಲು ಉದ್ದೇಶಿಸಿರುತ್ತಾರೆ.

ಮೇಲ್ಕಂಡ ಈ ಕ್ರಮದ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು–20 ರವರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ (15) ಹದಿನೈದು ದಿವಸಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಷೆಡ್ಯೂಲ್

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೃಷ್ಣರಾಜಪುರ ಉಪವಲಯದ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ಶೀಗೇಹಳ್ಳಿ ಗ್ರಾಮದ ಶೀಗೇಹಳ್ಳಿ ಕಾಲೋನಿ ಕೊಳಚೆ ಪ್ರದೇಶದ ಚಕ್ಕುಬಂದಿ ಮತ್ತು ಹದ್ದುಬಸ್ತು ತಃಖ್ತೆ.

ಕ್ರ. ಸಂ.	ಕೊಳಚೆ ಪ್ರದೇಶದ ಹೆಸರು ಮತ್ತು ಸ್ಥಳ	ಕೊಳಚೆ ಪ್ರದೇಶದಲ್ಲಿರುವ ಜಮೀನಿನ ಮಾಲೀಕರ ಹೆಸರು	ಸರ್ವೆ ನಂ.	ವಿಸ್ತೀರ್ಣ ಎ.ಗುಂ.	ಚೆಕ್ಕುಬಂದಿಗಳು			
					ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
1	2	3	4	5	6	7	8	9
1.	ಶೀಗೇಹಳ್ಳಿ ಕಾಲೋನಿ ಕೊಳಚೆ ಪ್ರದೇಶ, ಶೀಗೇಹಳ್ಳಿ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು.	ಸರ್ಕಾರಿ (ಗೋಮಾಳ)	24	3.04	ಬಸವನಪುರ	ಮಲ್ಲಪ್ಪನ ಗಾರ್ಡನ್	ಕುರಡು ಸೊಣ್ಣೇನಹಳ್ಳಿ ರಸ್ತೆ	ಸೀಗೇಹಳ್ಳಿ ಗ್ರಾಮ

ಎಂ.ಕೆ. ಅಯ್ಯಪ್ಪ
ಪಿ.ಆರ್. 363 ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಪ್ರಿಲಿಮಿನರಿ ಅಧಿಸೂಚನೆ

ಸಂ.ಕೆ.ಎಸ್.ಎ.:ಸಿಆರ್:115/10–11, ದಿನಾಂಕ:16ನೇ ಸೆಪ್ಟೆಂಬರ್, 2010

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೃಷ್ಣರಾಜಪುರ ಉಪವಲಯದ ವ್ಯಾಪ್ತಿಯಲ್ಲಿ ಬರುವ ಸಣ್ಣತಮ್ಮನಹಳ್ಳಿ ಗ್ರಾಮದ ಅಂಬೇಡ್ಕರ್ ಕಾಲೋನಿ ಕೊಳಚೆ ಪ್ರದೇಶದ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶದಲ್ಲಿ 37 ಕುಟುಂಬಗಳು ವಾಸವಾಗಿದ್ದು, ಈ ಪ್ರದೇಶದಲ್ಲಿ ಹಿಂದಿನ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸ್ವಲ್ಪ ಮಟ್ಟಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದ್ದರೂ ಸಹಾ ಈಗಲೂ ಇದು ಕೊಳಚೆ ಪ್ರದೇಶದ ಗುಣ ಲಕ್ಷಣಗಳನ್ನು ಹೊಂದಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ದಿನಾಂಕ:16.01.2007 ರಿಂದ ಅಸ್ತಿತ್ವಕ್ಕೆ ಬಂದಿರುವ ಹಿನ್ನಲೆಯಲ್ಲಿ ಸದರಿ ಕೊಳಚೆ ಪ್ರದೇಶದಲ್ಲಿನ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ನೀಡಲು ಸರ್ಕಾರ ತೀರ್ಮಾನಿಸಿರುವುದರಿಂದ, ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರ ಸೆಕ್ಷನ್ 3 ರಡಿಯಲ್ಲಿ ಕೊಳಚೆ ಪ್ರದೇಶವೆಂದು ಘೋಷಿಸಲು ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಇವರಿಂದ ವರದಿ ಸಲ್ಲಿಸಲ್ಪಟ್ಟಿರುತ್ತದೆ. ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3 ರಡಿ ಕೊಳಚೆ ಪ್ರದೇಶವೆಂದು ಘೋಷಿಸುವುದು ಅವಶ್ಯವೆಂದು ಕಂಡುಬಂದಿರುತ್ತದೆ.

ಏತನ್ಮಧ್ಯೆ ಸರ್ಕಾರದ ಸುತ್ತೋಲೆ ಸಂ.71 ಕೊಮಂಇ 2009, ದಿನಾಂಕ:24.02.2010ರಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಕಲಂ 3 ಮತ್ತು 11ರಡಿಯಲ್ಲಿ ಜಿಲ್ಲಾಧಿಕಾರಿಗಳು, ಕೊಳಚೆ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸಿ ಅಧಿಸೂಚನೆ ಹೊರಡಿಸುವ ಮುನ್ನ ವಸತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಯವರ ಅನುಮೋದನೆ ಪಡೆಯತಕ್ಕದ್ದೆಂದು ಸೂಚನೆಯಿದ್ದು, ಆ ಪ್ರಕಾರವಾಗಿ ಕೊಳಚೆ ಪ್ರದೇಶಗಳೆಂದು ಘೋಷಣೆ ಮಾಡಬೇಕಾದ ಪ್ರಸ್ತಾವನೆಗಳನ್ನು ಈ ಕಛೇರಿಯಿಂದ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು. ತದನಂತರದಲ್ಲಿ ಸರ್ಕಾರದ ಪತ್ರ ಸಂ.ವಇ 71 ಕೊಮಂಇ 2009, ದಿನಾಂಕ:12.07.2010ರ ಪತ್ರದಲ್ಲಿ ಕೊಳಚೆ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಕೋರಿ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವ ಬದಲು ದಿನಾಂಕ:02.07.2010ರಲ್ಲಿನ ಸೂಚನೆಯಂತೆ ಮತ್ತು ಹಾಲಿ ಅಸ್ತಿತ್ವದಲ್ಲಿರುವ ನಿಯಮಗಳಡಿಯ ಕಾರ್ಯವಿಧಾನವನ್ನನುಸರಿಸಿದಂತೆ ಕ್ರಮವಹಿಸಿ, ಅಧಿಸೂಚನೆ ಸಂಖ್ಯೆ: ವಇ 73 ಕೊಮಂಇ 2001, ದಿನಾಂಕ:26.06.2002ರಲ್ಲಿ ಜಿಲ್ಲಾಧಿಕಾರಿಗಳಿಗೆ ಪ್ರದತ್ತ ಮಾಡಲಾಗಿರುವ ಅಧಿಕಾರ ವ್ಯಾಪ್ತಿಯಲ್ಲಿ ಘೋಷಣೆಗೆ ಕ್ರಮವಹಿಸುವುದು ಎಂದು ಸರ್ಕಾರವು ನಿರ್ದೇಶನ ನೀಡಿ ಪ್ರಸ್ತಾವನೆಗಳನ್ನು ಹಿಂದಿರುಗಿಸಲ್ಪಟ್ಟಿರುತ್ತದೆ ಮತ್ತು ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಅವರಿಗೆ ಹಿಂದಿನಂತೆ ತಮ್ಮ ಕಛೇರಿಯ ಹಂತದಲ್ಲಿಯೇ ಕೊಳಚೆ ಪ್ರದೇಶಗಳ ಘೋಷಣೆಯನ್ನು ಮಾಡಲು ನಿರ್ದೇಶನ ನೀಡಿರುತ್ತದೆ.

ಆದ್ದರಿಂದ ಈ ಕೆಳ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3ರಡಿ ಜಿಲ್ಲಾಧಿಕಾರಿಗಳಿಗೆ ದತ್ತವಾಗಿರುವ ಅಧಿಕಾರದಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ರವರು 'ಕೊಳಚೆ ಪ್ರದೇಶ' ವೆಂದು ಘೋಷಿಸಲು ಉದ್ದೇಶಿಸಿರುತ್ತಾರೆ.

ಮೇಲ್ಕಂಡ ಈ ಕ್ರಮದ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು–20 ರವರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ (15) ಹದಿನೈದು ದಿವಸಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಷೆಡ್ಯೂಲ್

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೃಷ್ಣರಾಜಪುರ ಉಪವಲಯದ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ಸಣ್ಣತಮ್ಮನಹಳ್ಳಿ ಗ್ರಾಮದ ಅಂಬೇಡ್ಕರ್ ಕಾಲೋನಿ ಕೊಳಚೆ ಪ್ರದೇಶದ ಚಕ್ಕುಬಂದಿ ಮತ್ತು ಹದ್ದುಬಸ್ತು ತಃಖ್ತೆ.

ಕ್ರ. ಸಂ.	ಕೊಳಚೆ ಪ್ರದೇಶದ ಹೆಸರು ಮತ್ತು ಸ್ಥಳ	ಕೊಳಚೆ ಪ್ರದೇಶದಲ್ಲಿರುವ ಜಮೀನಿನ ಮಾಲೀಕರ ಹೆಸರು	ಸರ್ವೆ ನಂ.	ವಿಸ್ತೀರ್ಣ ಎ.ಗುಂ.	ಚೆಕ್ಕುಬಂದಿಗಳು			
					ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
1	2	3	4	5	6	7	8	9
1.	ಅಂಬೇಡ್ಕರ್ ಕಾಲೋನಿ ಕೊಳಚೆ ಪ್ರದೇಶ, ಸಣ್ಣತಮ್ಮನಹಳ್ಳಿ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು.	ಗ್ರಾಮ ಠಾಣ	–	1.00	ರಸ್ತೆ	ಖಾಸಗಿ ಸ್ವತ್ತು	ರಾಮಪಾಳ್ಯ ಬಡಾವಣೆ	ಮಸೀದಿ ರಸ್ತೆ

ಎಂ.ಕೆ. ಅಯ್ಯಪ್ಪ
ಪಿ.ಆರ್. 364 ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಪ್ರಿಲಿಮಿನರಿ ಅಧಿಸೂಚನೆ

ಸಂ.ಕೆ.ಎಸ್.ಎ.:ಸಿಆರ್:117/10–11, ದಿನಾಂಕ:16ನೇ ಸೆಪ್ಟೆಂಬರ್, 2010

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಜೆ.ಪಿ.ನಗರ ಉಪವಲಯದ ವ್ಯಾಪ್ತಿಯಲ್ಲಿ ಬರುವ ಗುಡ್ಡದಹಳ್ಳಿ ಗ್ರಾಮದ ಗುಡ್ಡದಹಳ್ಳಿ ಕೊಳಚೆ ಪ್ರದೇಶದ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶದಲ್ಲಿ 24 ಕುಟುಂಬಗಳು ವಾಸವಾಗಿದ್ದು, ಈ ಪ್ರದೇಶದಲ್ಲಿ ಹಿಂದಿನ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸ್ವಲ್ಪ ಮಟ್ಟಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದ್ದರೂ ಸಹಾ ಈಗಲೂ ಇದು ಕೊಳಚೆ ಪ್ರದೇಶದ ಗುಣ ಲಕ್ಷಣಗಳನ್ನು ಹೊಂದಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ದಿನಾಂಕ:16.01.2007 ರಿಂದ ಅಸ್ತಿತ್ವಕ್ಕೆ ಬಂದಿರುವ ಹಿನ್ನಲೆಯಲ್ಲಿ ಸದರಿ ಕೊಳಚೆ ಪ್ರದೇಶದಲ್ಲಿನ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ನೀಡಲು ಸರ್ಕಾರ ತೀರ್ಮಾನಿಸಿರುವುದರಿಂದ, ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರ ಸೆಕ್ಷನ್ 3 ರಡಿಯಲ್ಲಿ ಕೊಳಚೆ ಪ್ರದೇಶವೆಂದು ಘೋಷಿಸಲು ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಇವರಿಂದ ವರದಿ ಸಲ್ಲಿಸಲ್ಪಟ್ಟಿರುತ್ತದೆ. ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3 ರಡಿ ಕೊಳಚೆ ಪ್ರದೇಶವೆಂದು ಘೋಷಿಸುವುದು ಅವಶ್ಯವೆಂದು ಕಂಡುಬಂದಿರುತ್ತದೆ.

ಏತನ್ಮಧ್ಯೆ ಸರ್ಕಾರದ ಸುತ್ತೋಲೆ ಸಂ.71 ಕೊಮಂಇ 2009, ದಿನಾಂಕ:24.02.2010ರಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಕಲಂ 3 ಮತ್ತು 11ರಡಿಯಲ್ಲಿ ಜಿಲ್ಲಾಧಿಕಾರಿಗಳು, ಕೊಳಚೆ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸಿ ಅಧಿಸೂಚನೆ ಹೊರಡಿಸುವ ಮುನ್ನ ವಸತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಯವರ ಅನುಮೋದನೆ ಪಡೆಯತಕ್ಕದ್ದೆಂದು ಸೂಚನೆಯಿದ್ದು, ಆ ಪ್ರಕಾರವಾಗಿ ಕೊಳಚೆ ಪ್ರದೇಶಗಳೆಂದು ಘೋಷಣೆ ಮಾಡಬೇಕಾದ ಪ್ರಸ್ತಾವನೆಗಳನ್ನು ಈ ಕಛೇರಿಯಿಂದ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು. ತದನಂತರದಲ್ಲಿ ಸರ್ಕಾರದ ಪತ್ರ ಸಂ.ವಇ 71 ಕೊಮಂಇ 2009, ದಿನಾಂಕ:12.07.2010ರ ಪತ್ರದಲ್ಲಿ ಕೊಳಚೆ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಕೋರಿ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವ ಬದಲು ದಿನಾಂಕ:02.07.2010ರಲ್ಲಿನ ಸೂಚನೆಯಂತೆ ಮತ್ತು ಹಾಲಿ ಅಸ್ತಿತ್ವದಲ್ಲಿರುವ ನಿಯಮಗಳಡಿಯ ಕಾರ್ಯವಿಧಾನವನ್ನನುಸರಿಸಿದಂತೆ ಕ್ರಮವಹಿಸಿ, ಅಧಿಸೂಚನೆ ಸಂಖ್ಯೆ: ವಇ 73 ಕೊಮಂಇ 2001, ದಿನಾಂಕ:26.06.2002ರಲ್ಲಿ ಜಿಲ್ಲಾಧಿಕಾರಿಗಳಿಗೆ ಪ್ರದತ್ತ ಮಾಡಲಾಗಿರುವ ಅಧಿಕಾರ ವ್ಯಾಪ್ತಿಯಲ್ಲಿ ಘೋಷಣೆಗೆ ಕ್ರಮವಹಿಸುವುದು ಎಂದು ಸರ್ಕಾರವು ನಿರ್ದೇಶನ ನೀಡಿ ಪ್ರಸ್ತಾವನೆಗಳನ್ನು ಹಿಂದಿರುಗಿಸಲ್ಪಟ್ಟಿರುತ್ತದೆ ಮತ್ತು ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಅವರಿಗೆ ಹಿಂದಿನಂತೆ ತಮ್ಮ ಕಛೇರಿಯ ಹಂತದಲ್ಲಿಯೇ ಕೊಳಚೆ ಪ್ರದೇಶಗಳ ಘೋಷಣೆಯನ್ನು ಮಾಡಲು ನಿರ್ದೇಶನ ನೀಡಿರುತ್ತದೆ.

ಆದ್ದರಿಂದ ಈ ಕೆಳ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3ರಡಿ ಜಿಲ್ಲಾಧಿಕಾರಿಗಳಿಗೆ ದತ್ತವಾಗಿರುವ ಅಧಿಕಾರದಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ರವರು 'ಕೊಳಚೆ ಪ್ರದೇಶ' ವೆಂದು ಘೋಷಿಸಲು ಉದ್ದೇಶಿಸಿರುತ್ತಾರೆ.

ಮೇಲ್ಕಂಡ ಈ ಕ್ರಮದ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು-20 ರವರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ (15) ಹದಿನೈದು ದಿವಸಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಷೆಡ್ಯೂಲ್

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಜೆ.ಪಿ.ನಗರ ಉಪವಲಯದ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು ಉತ್ತರ ತಾಲ್ಲೂಕು, ಕಸಬಾ ಹೋಬಳಿ, ಗುಡ್ಡದಹಳ್ಳಿ ಗ್ರಾಮದ ಗುಡ್ಡದಹಳ್ಳಿ ಕೊಳಚೆ ಪ್ರದೇಶದ ಚಕ್ಕುಬಂದಿ ಮತ್ತು ಹದ್ದುಬಸ್ತು ತಃಖ್ತೆ.

ಕ್ರ. ಸಂ.	ಕೊಳಚೆ ಪ್ರದೇಶದ ಹೆಸರು ಮತ್ತು ಸ್ಥಳ	ಕೊಳಚೆ ಪ್ರದೇಶದಲ್ಲಿರುವ ಜಮೀನಿನ ಮಾಲೀಕರ ಹೆಸರು	ಸರ್ವೆ ನಂ.	ವಿಸ್ತೀರ್ಣ ಎ.ಗುಂ.	ಚೆಕ್ಕುಬಂದಿಗಳು ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
1	2	3	4	5	6	7	8	9
1.	ಗುಡ್ಡದಹಳ್ಳಿ ಕೊಳಚೆ ಪ್ರದೇಶ, ಗುಡ್ಡದಹಳ್ಳಿ ಗ್ರಾಮ, ಕಸಬಾ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು.	ಸರ್ಕಾರಿ (ಗುಂಡುತೋಪು)	12	1.28	ಖಾಸಗಿ ಸ್ವತ್ತು ಗುಡ್ಡದಹಳ್ಳಿ ಗ್ರಾಮ	ಚೆನ್ನಣ್ಣ ಬಡಾವಣೆ	ಖಾಸಗಿ ಸ್ವತ್ತು	ಖಾಸಗಿ ಸ್ವತ್ತು ಹಾಗೂ ಗುಡ್ಡದಹಳ್ಳಿ ಮುಖ್ಯರಸ್ತೆ

ಎಂ.ಕೆ. ಅಯ್ಯಪ್ಪ

ಪಿ.ಆರ್. 365

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ 32 ಎಲ್‌ಆರ್‌ಎಂ 2010, ಬೆಂಗಳೂರು, ದಿನಾಂಕ:4ನೇ ಆಗಸ್ಟ್, 2010

ಸಮತಾ ಲೋಕ ಶಿಕ್ಷಣ ಸಮಿತಿ, ಗುಲ್ಬರ್ಗಾ, ಇವರು ಗುಲ್ಬರ್ಗಾ ಜಿಲ್ಲೆ, ಆಳಂದ ತಾಲ್ಲೂಕು ಆಳಂದ ಪಟ್ಟಣದ ಸರ್ವೆ ನಂ.691 ರಲ್ಲಿ 15 ಎಕರೆ ಮತ್ತು ಜಮಗಾ (ಜೆ) ಗ್ರಾಮದ ಸರ್ವೆ ನಂಬರ್ 45/2 ರಲ್ಲಿ 56 ಎಕರೆ 3 ಗುಂಟೆ ಹೀಗೆ ಒಟ್ಟು 71 ಎಕರೆ 03 ಗುಂಟೆ ಕೃಷಿ ಜಮೀನನ್ನು ಖರೀದಿಸಿದ್ದು ಈ ಬಗ್ಗೆ ನಮೂನೆ 15-ಎ ಮತ್ತು ನಮೂನೆ 15-ಎಎ, ಗಳಲ್ಲಿನ ಮಾಹಿತಿ ಅನುಸರಿಸಿ ಜಿಲ್ಲಾಧಿಕಾರಿ, ಗುಲ್ಬರ್ಗಾ ಜಿಲ್ಲೆ, ಇವರ ಪತ್ರ ಸಂಖ್ಯೆ:ಕಂ/ಭೂಸು/100/2009-10, ದಿನಾಂಕ:05.04.2010ರಲ್ಲಿ ಪ್ರಸ್ತಾಪಿತ ಮೇಲ್ಕಂಡ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಕರ್ನಾಟಕ ಭೂ ಸುಧಾರಣೆ ಕಾಯ್ದೆ (ತಿದ್ದುಪಡಿ) 2005ರ ಕಲಂ 109 (1)(ಎ)ರಡಿ ಅನುಮತಿ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾಪಿತ ಜಮೀನು ದಾನ ಪಡೆಯಲು ಖಾತೆದಾರರಿಂದ ವ್ಯವಹರಿಸಿಕೊಂಡಿದ್ದು ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್.) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣಗಳನ್ನು ದಾಖಲಿಸಿ, ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿರ್ಬಂದನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1)ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆಯು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38-ಬಿ ಮತ್ತು 38-ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ, ಅಥವಾ 80ಕ್ಕೆ ವಿನಾಯಿತಿ ನೀಡಿ ಸಮತಾ ಲೋಕ ಶಿಕ್ಷಣ ಸಮಿತಿ, ಗುಲ್ಬರ್ಗಾ, ಇವರು ಗುಲ್ಬರ್ಗಾ ಜಿಲ್ಲೆ, ಆಳಂದ ತಾಲ್ಲೂಕು ಆಳಂದ ಪಟ್ಟಣದ ಸರ್ವೆ ನಂ.691 ರಲ್ಲಿ 15 ಎಕರೆ ಮತ್ತು ಜಮಗಾ (ಜೆ) ಗ್ರಾಮದ ಸರ್ವೆ ನಂಬರ್ 45/2 ರಲ್ಲಿ 56 ಎಕರೆ 3 ಗುಂಟೆ ಹೀಗೆ ಒಟ್ಟು 71 ಎಕರೆ 03 ಗುಂಟೆ ಶೈಕ್ಷಣಿಕ ಉದ್ದೇಶಕ್ಕಾಗಿ ದಾನವಾಗಿ ಪಡೆಯಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ:

1) ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷಗಳೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.

2) ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1956ರ ಕಲಂ 3ರಲ್ಲಿ ಹೇಳಿರುವಂತೆ ಶೇಕಡಾ 51 ಪೇಯ್ಡ್ ಅಪ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಹಿಡಿತ ಹೊಂದಿರುವ ಸರ್ಕಾರದ ಸಂಘ/ ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

3) ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.

4) ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

5) ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 95ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.

6) ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು.

7) ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ ಅಭಿವೃದ್ಧಿ ಪ್ರಾಧಿಕಾರ/ ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.

8) ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ನಾರಾಯಣ ಗೌಡ

ಪಿ.ಆರ್. 302

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ (ಭೂ ಸುಧಾರಣೆ)

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ 21 ಎಲ್‌ಆರ್‌ಎಂ 2010, ಬೆಂಗಳೂರು, ದಿನಾಂಕ:10ನೇ ಆಗಸ್ಟ್, 2010

ಚಿಲ್ಲೀಸ್ ರಿಕ್ರಿಯೇಷನ್ ಅಸೋಸಿಯೇಷನ್, ಬ್ಯಾಡಗಿ, ಹಾವೇರಿ ಜಿಲ್ಲೆ, ಇವರು ಹಾವೇರಿ ಜಿಲ್ಲೆ, ಬ್ಯಾಡಗಿ ತಾಲ್ಲೂಕಿನ, ಗುಮ್ಮನಹಳ್ಳಿ ಗ್ರಾಮದ ರಿ.ಸರ್ವೆ ನಂ.23/3+4+5+6+8+17/ಡ, ಮತ್ತು ಇತರೆಗಳಲ್ಲಿ ಒಟ್ಟು 01 ಎಕರೆ 34 ಗುಂಟೆ ಕೃಷಿ ಜಮೀನನ್ನು ಹೆಲ್ತ್ ಕ್ಲಬ್ ಹಾಗೂ ರಿಕ್ರಿಯೇಷನ್ ಕ್ಲಬ್ ಸ್ಥಾಪಿಸುವ ಉದ್ದೇಶಕ್ಕಾಗಿ ನಮೂನೆ 15-ಎ ಮತ್ತು ನಮೂನೆ 15-ಎಎ, ಗಳಲ್ಲಿನ ಮಾಹಿತಿ ಅನುಸರಿಸಿ ಜಿಲ್ಲಾಧಿಕಾರಿಗಳು, ಹಾವೇರಿ, ಇವರ ಪತ್ರ ಸಂಖ್ಯೆ: ಭೂಸು(108)/ಸಿಆರ್/18/2007-08, ದಿನಾಂಕ:08.02.2010ರಲ್ಲಿ ಪ್ರಸ್ತಾಪಿತ ಮೇಲ್ಕಂಡ 01 ಎಕರೆ 34 ಗುಂಟೆ ಜಮೀನನ್ನು ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ (ತಿದ್ದುಪಡಿ) 2005ರ ಕಲಂ 109(1)(ಎ) ರಡಿ ಅನುಮತಿ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾಪಿತ ಜಮೀನು ಖರೀದಿಸಲು ಖಾತೆದಾರರಿಂದ ಕರಾರು ಪತ್ರ ಮಾಡಿಕೊಂಡಿರುತ್ತಾರೆ ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್.) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣಗಳನ್ನು ದಾಖಲಿಸಿ, ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿರ್ಬಂಧನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1)ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38-ಬಿ ಮತ್ತು 38-ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ, ಅಥವಾ 80ಕ್ಕೆ ವಿನಾಯಿತಿ ನೀಡಿ ಚಿಲ್ಲೀಸ್ ರಿಕ್ರಿಯೇಷನ್ ಅಸೋಸಿಯೇಷನ್, ಬ್ಯಾಡಗಿ, ಹಾವೇರಿ ಜಿಲ್ಲೆ, ಇವರು ಹಾವೇರಿ ಜಿಲ್ಲೆ, ಬ್ಯಾಡಗಿ ತಾಲ್ಲೂಕಿನ, ಗುಮ್ಮನಹಳ್ಳಿ ಗ್ರಾಮದ ರಿ.ಸರ್ವೆ ನಂ.23/3+4+5+6+8+17/ಡ, ಮತ್ತು ಇತರೆಗಳಲ್ಲಿ ಒಟ್ಟು 01 ಎಕರೆ 34 ಗುಂಟೆ ಕೃಷಿ ಜಮೀನನ್ನು ಹೆಲ್ತ್ ಕ್ಲಬ್ ಹಾಗೂ ರಿಕ್ರಿಯೇಷನ್ ಕ್ಲಬ್ ಸ್ಥಾಪಿಸುವ ಉದ್ದೇಶಕ್ಕಾಗಿ ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109(1)ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ:

1) ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷಗಳೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.

2) ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1956ರ ಕಲಂ 3ರಲ್ಲಿ ಹೇಳಿರುವಂತೆ ಶೇಕಡಾ 51 ಪೇಯ್ಡ್ ಅಪ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಹಿಡಿತ ಹೊಂದಿರುವ ಸರ್ಕಾರದ ಸಂಘ/ ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

3) ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.

4) ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

5) ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 95ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.

6) ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು.

7) ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ ಅಭಿವೃದ್ಧಿ ಪ್ರಾಧಿಕಾರ/ ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.

8) ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ನಾರಾಯಣ ಗೌಡ

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ (ಭೂ ಸುಧಾರಣೆ)

ಪಿ.ಆರ್. 320

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ 34 ಎಲ್‌ಆರ್‌ಎಂ 2010, ಬೆಂಗಳೂರು, ದಿನಾಂಕ:10ನೇ ಆಗಸ್ಟ್, 2010

ಮೆ: ಗೋದ್ರೇಜ್ ಆಗ್ರೋವೇಟ್ ಪ್ರೈ.ಲಿ., ಬೆಂಗಳೂರು ಇವರು ಚಿತ್ರದುರ್ಗ ಜಿಲ್ಲೆ, ಹಿರಿಯೂರು ತಾಲ್ಲೂಕಿನ, ಜವನಗೊಂಡನಹಳ್ಳಿ ಹೋಬಳಿ, ದಿಂಡಾವರ ಗ್ರಾಮದ ರಿ.ಸರ್ವೆ ನಂ.151/3ರಲ್ಲಿ ಒಟ್ಟು 9 ಎಕರೆ 15 ಗುಂಟೆ ಕೃಷಿ ಜಮೀನನ್ನು ಕೋಳಿ ಸಾಕಾಣಿಕೆ ಕೇಂದ್ರ ಸ್ಥಾಪಿಸುವ ಉದ್ದೇಶಕ್ಕಾಗಿ ನಮೂನೆ 15–ಎ ಮತ್ತು ನಮೂನೆ 15–ಎಎ, ಗಳಲ್ಲಿನ ಮಾಹಿತಿ ಅನುಸರಿಸಿ ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಇವರ ಪತ್ರ ಸಂಖ್ಯೆ: ಎಲ್‌ಆರ್‌ಎಂ/ಸಿಆರ್/29/2009–10, ದಿನಾಂಕ:25.03.2010ರಲ್ಲಿ ಪ್ರಸ್ತಾಪಿತ ಮೇಲ್ಕಂಡ 9 ಎಕರೆ 15 ಗುಂಟೆ ಜಮೀನನ್ನು ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ (ತಿದ್ದುಪಡಿ) 2005ರ ಕಲಂ 109(1)(ಎ) ರಡಿ ಅನುಮತಿ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾಪಿತ ಜಮೀನು ಖರೀದಿಸಲು ಖಾತೆದಾರರಿಂದ ಕರಾರು ಪತ್ರ ಮಾಡಿಕೊಂಡಿರುತ್ತಾರೆ ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್.) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣಗಳನ್ನು ದಾಖಲಿಸಿ, ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿರ್ಬಂಧನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1)ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38–ಬಿ ಮತ್ತು 38–ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ, ಅಥವಾ 80ಕ್ಕೆ ವಿನಾಯಿತಿ ನೀಡಿ ಮೆ:ಗೋದ್ರೇಜ್ ಆಗ್ರೋವೇಟ್ ಪ್ರೈ.ಲಿ., ಬೆಂಗಳೂರು ಇವರು ಚಿತ್ರದುರ್ಗ ಜಿಲ್ಲೆ, ಹಿರಿಯೂರು ತಾಲ್ಲೂಕಿನ, ಜವನಗೊಂಡನಹಳ್ಳಿ ಹೋಬಳಿ, ದಿಂಡಾವರ ಗ್ರಾಮದ ರಿ. ಸರ್ವೆ ನಂ.151/3ರಲ್ಲಿ ಒಟ್ಟು 9 ಎಕರೆ 15 ಗುಂಟೆ ಕೃಷಿ ಜಮೀನನ್ನು ಕೋಳಿ ಸಾಕಾಣಿಕೆ ಕೇಂದ್ರ ಸ್ಥಾಪಿಸುವ ಉದ್ದೇಶಕ್ಕಾಗಿ ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109(1)ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ:

1) ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷಗಳೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.

2) ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1956ರ ಕಲಂ 3ರಲ್ಲಿ ಹೇಳಿರುವಂತೆ ಶೇಕಡಾ 51 ಪೇಯ್ಡ್ ಅಪ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಹಿಡಿತ ಹೊಂದಿರುವ ಸರ್ಕಾರದ ಸಂಘ/ ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

3) ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.

4) ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

5) ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 95ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.

6) ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು.

7) ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ ಅಭಿವೃದ್ಧಿ ಪ್ರಾಧಿಕಾರ/ ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.

8) ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ನಾರಾಯಣ ಗೌಡ

ಪಿ.ಆರ್. 303

ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂ ಸುಧಾರಣೆ)

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ 53 ಎಲ್‌ಆರ್‌ಎಂ 2010, ಬೆಂಗಳೂರು, ದಿನಾಂಕ:13ನೇ ಸೆಪ್ಟೆಂಬರ್, 2010

ಮೆ: ಹೈದ್ರಾಬಾದ್ ಕೆಮಿಕಲ್ ಲಿ., ಹೈದ್ರಾಬಾದ, ಇವರು ಬೀದರ್ ತಾಲ್ಲೂಕಿನ, ಬರೂರ ಮತ್ತು ಚಿಂತಲಗೇರಾ ಗ್ರಾಮದ ಸರ್ವೆ ನಂ.23, 14/ಪಿ1, 14/ಪಿ2, 14/ಪಿ3 ಮತ್ತು ಸರ್ವೆ ನಂ.358 ರಲ್ಲಿ ಒಟ್ಟು ವಿಸ್ತೀರ್ಣ 50 ಎಕರೆ 33 ಗುಂಟೆ ಕೃಷಿ ಜಮೀನನ್ನು ಕೈಗಾರಿಕಾ ಮತ್ತು ವ್ಯವಸಾಯೇತರ ಉದ್ದೇಶಕ್ಕಾಗಿ ನಮೂನೆ 15-ಎ ಮತ್ತು ನಮೂನೆ 15-ಎಎ, ಗಳಲ್ಲಿನ ಮಾಹಿತಿ ಅನುಸರಿಸಿ ಜಿಲ್ಲಾಧಿಕಾರಿಗಳು, ಬೀದರ್, ಇವರ ಪತ್ರ ಸಂಖ್ಯೆ: ಕಂ/ಭೂಸು/ಸಿಆರ್-2336/2009-10 ದಿನಾಂಕ:10.05.2010ರಲ್ಲಿ ಪ್ರಸ್ತಾಪಿತ ಜಮೀನನ್ನು ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ (ತಿದ್ದುಪಡಿ) 2005ರ ಕಲಂ 109(1)(ಎ) ರಡಿ ಅನುಮತಿ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾಪಿತ ಜಮೀನು ಖರೀದಿಸಲು ಖಾತೆದಾರರಿಂದ ಕರಾರು ಪತ್ರ ಮಾಡಿಕೊಂಡಿರುತ್ತಾರೆ ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್.) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣಗಳನ್ನು ದಾಖಲಿಸಿ, ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿರ್ಬಂಧನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1)ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38-ಬಿ ಮತ್ತು 38-ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ, ಅಥವಾ 80ಕ್ಕೆ ವಿನಾಯಿತಿ ನೀಡಿ ಮೆ:ಹೈದ್ರಾಬಾದ್ ಕೆಮಿಕಲ್ ಲಿ., ಹೈದ್ರಾಬಾದ್, ಇವರು ಬೀದರ್ ತಾಲ್ಲೂಕಿನ, ಬರೂರ ಮತ್ತು ಚಿಂತಲಗೇರಾ ಗ್ರಾಮದ ಸರ್ವೆ ನಂ.23, 14/ಪಿ1, 14/ಪಿ2, 14/ಪಿ3 ಮತ್ತು ಸರ್ವೆ ನಂ.358ರಲ್ಲಿ ಒಟ್ಟು ವಿಸ್ತೀರ್ಣ 50 ಎಕರೆ 33 ಗುಂಟೆ ಕೃಷಿ ಜಮೀನನ್ನು ಕೈಗಾರಿಕಾ ಮತ್ತು ವ್ಯವಸಾಯೇತರ ಉದ್ದೇಶಕ್ಕಾಗಿ ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109(1)ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ:

1) ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷಗಳೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.

2) ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1956ರ ಕಲಂ 3ರಲ್ಲಿ ಹೇಳಿರುವಂತೆ ಶೇಕಡಾ 51 ಪೇಯ್ಡ್ ಅಪ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಹಿಡಿತ ಹೊಂದಿರುವ ಸರ್ಕಾರದ ಸಂಘ/ ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

3) ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.

4) ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

5) ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 95ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.

6) ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು.

7) ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ ಅಭಿವೃದ್ಧಿ ಪ್ರಾಧಿಕಾರ/ ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.

8) ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ನಾರಾಯಣ ಗೌಡ

ಪಿ.ಆರ್. 376

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ (ಭೂ ಸುಧಾರಣೆ)

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆರ್‌ಡಿ 131 ಎಲ್‌ಜಿಕೆ 2010, ಬೆಂಗಳೂರು, ದಿನಾಂಕ:20ನೇ ಸೆಪ್ಟೆಂಬರ್, 2010

ನಮೂನೆ 29

68ನೇ ಪ್ರಕರಣದ (5)ನೇ ಉಪ–ಪ್ರಕರಣದ ಮೇರೆಗಿನ ಘೋಷಣೆ–ನಿಯಮ 96

ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ 68ನೇ ಪ್ರಕರಣದ (5)ನೇ ಉಪ–ಪ್ರಕರಣದಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸದರಿ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ಹೊರಡಿಸಿದ 07.08.2009ರ ದಿನಾಂಕದ ಎಲ್ಎನ್‌ಡಿ ಸಿಆರ್ 17/08–09ರ ಕ್ರಮ ಸಂಖ್ಯೆಯ ಅಧಿಸೂಚನೆಯ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಮತ್ತು ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಕಾಲುದಾರಿ ಜಮೀನು ಸಾರ್ವಜನಿಕರ ಉಪಯೋಗಕ್ಕೆ ಅಗತ್ಯವಿಲ್ಲವೆಂದು ವ್ಯವಹರಣೆಗಳ ದಾಖಲೆಗಳನ್ನು ಹಾಗೂ ಪ್ರಾದೇಶಿಕ ಆಯುಕ್ತರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳ ವರದಿಯನ್ನು ರಾಜ್ಯ ಸರ್ಕಾರವು ಪರಿಶೀಲಿಸಿದ ತರುವಾಯ, ಖರಾಬು ಸಾರ್ವಜನಿಕರ ಹಾಗೂ ವ್ಯಕ್ತಿಗಳ ಎಲ್ಲಾ ಹಕ್ಕುಗಳು ಕೊನೆಗೊಳ್ಳತಕ್ಕುದೆಂದು ಈ ಮೂಲಕ ಘೋಷಿಸಿದೆ.

ಅನುಸೂಚಿ

ಖರಾಬ್ ಜಮೀನು ಇರುವ ಗ್ರಾಮ	ತೌಡಹಳ್ಳಿ
ತಾಲ್ಲೂಕು	ಚಿಕ್ಕಬಳ್ಳಾಪುರ
ಜಿಲ್ಲೆ	ಚಿಕ್ಕಬಳ್ಳಾಪುರ
ಸದರಿ ಭಾಗದ ವರ್ಣನೆ	ಖರಾಬು
ಖರಾಬ್ ಸರಿ ಸುಮಾರು ವಿಸ್ತೀರ್ಣ	0.10 ಗುಂಟೆ (ಸ.ನಂ.1)
ಮೇರೆಗಳು	ಪೂರ್ವಕ್ಕೆ: ಸ.ನಂ.1ರ ಉಳಿಕೆ ಜಮೀನು ಪಶ್ಚಿಮಕ್ಕೆ: ಸ.ನಂ.1ರ ಉಳಿಕೆ ಜಮೀನು ಉತ್ತರಕ್ಕೆ: ಸ.ನಂ.1ರ ಉಳಿಕೆ ಜಮೀನು ದಕ್ಷಿಣಕ್ಕೆ: ಸ.ನಂ.8, 7ರ ಹಿಡುವಳಿದಾರರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಇ. ಈಶ್ವರ ನಾಯಕ್

ಪಿ.ಆರ್. 378

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ (ಭೂ.ಮಂ.)